# ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆ ಸಾರಂಗಮಠ

# ಜಿ.ಪಿ.ಪೋರವಾಲ ಕಲಾ, ವಾಣಿಜ್ಯ ಹಾಗೂ ವ್ಹಿ.ವ್ಹಿ. ಸಾಲಿಮಠ ವಿಜ್ಞಾನ

# ಮತ್ತು ಬಿ.ಸಿ.ಎ. ಮಹಾವಿದ್ಯಾಲಯ, ಸಿಂದಗಿ

## 2021-22 ಸಾಲಿನ ವಾರ್ಷಿಕ ವರದಿ

ಲಿಂಗೈಕ್ಯ ಪೂಜ್ಯ ಶ್ರೀ ಚನ್ನವೀರ ಮಹಾಸ್ವಾಮೀಜಿಯವರನ್ನು ಎನ್ನ ಮನದೊಳಗೆ ಸ್ಮರಿಸಿಕೊಂಡು, ಪ್ರಸಕ್ತ ವಾರ್ಷಿಕ ಸ್ನೇಹ ಸಮ್ಮೇಳನದ ದಿವ್ಯ ಸಾನಿಧ್ಯವನ್ನು ವಹಿಸಿಕೊಂಡಿರುವ ಪರಮ ಪೂಜ್ಯ ಶ್ರೀ ಪ್ರಭುಸಾರಂಗದೇವ ಶಿವಾಚಾರ್ಯರ ಪಾದಕಮಲಗಳಿಗೆ ಭಕ್ತಿಯಿಂದ ಪೊಡಮೊಟ್ಟು, ಈ ವಾರ್ಷಿಕ ಸ್ನೇಹ ಸಮ್ಮೇಳನದ ಅಧ್ಯಕ್ಷರಾದ ನಮ್ಮ ಮಹಾವಿದ್ಯಾಲಯದ ನಮ್ಮೆಲ್ಲರ ನೆಚ್ಚಿನ ಪ್ರಾಚಾರ್ಯರಾದ ಶ್ರೀ D. M. ಪಾಟೀಲ, ವಿದ್ಯಾರ್ಥಿಸಂಘದ ಪ್ರಧಾನ ಕಾರ್ಯದರ್ಶಿಯಾದ ಕುಮಾರ ನಾಗೇಶ ದಾಸರ ಅವರೆ ಹಾಗೂ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ನಿರ್ದೇಶಕ ಮಂಡಳಿಯ ಸರ್ವ ಸದಸ್ಯರುಗಳೇ, ವಿವಿಧ ಮಹಾವಿದ್ಯಾಲಯಗಳ ಪ್ರಾಚಾರ್ಯರೆ, ಶಿಕ್ಷಕ, ಶಿಕ್ಷಕೇತರ ಬಂಧುಗಳೆ, ಪತ್ರಿಕಾ ಮಾಧ್ಯಮದ ಮಿತ್ರರೆ,. ಸಿಂದಗಿ ನಗರದ ಗಣ್ಯ ಮಾನ್ಯರೆ, ನಾಗರಿಕರೆ, ತಾಯಿಯಂದಿರೆ ಹಾಗೂ ವಿದ್ಯಾರ್ಥಿ/ವಿದ್ಯಾರ್ಥಿನಿಯರೆ.

ಸಿಂದಗಿಯ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಉತ್ತರ ಕರ್ನಾಟಕದ ಗ್ರಾಮೀಣ ಭಾಗದಲ್ಲಿ ತಲೆಯೆತ್ತಿ ನಿಂತಿರುವ ಏಕೈಕ ಪ್ರತಿಷ್ಠಿತ ಶಿಕ್ಷಣ ಸಂಸ್ಥೆ. ಈ ಸಂಸ್ಥೆ 1969 ರಲ್ಲಿ ಪರಮಪೂಜ್ಯ ಶ್ರೀ ಚನ್ನವೀರ ಮಹಾಸ್ವಾಮಿಜಿಯವರ ನೇತೃತ್ವದಲ್ಲಿ ಸಂಸ್ಥಾಪನೆಗೊಂಡು, ಈ ಸಂಸ್ಥೆಯ ಅಡಿಯಲ್ಲಿ 1972 ರಲ್ಲಿ ನಮ್ಮ ಮಹವಿದ್ಯಾಲಯವು ಪ್ರಾರಂಭಗೊಂಡು, ಪೂಜ್ಯರ ಭವ್ಯ ಸಂಕಲ್ಪ ಹೊತ್ತು ಸದ್ಯ ದಾಪುಗಾಲಿಟ್ಟು ಮುನ್ನಡೆಯುತ್ತಿರುವುದಕ್ಕೆ ನಮ್ಮ ಸಂಸ್ಥೆಯ ಸದ್ಯದ ಚೇರಮನ್ನರಾದ ಪರಮಪೂಜ್ಯ ಶ್ರೀ ಪ್ರಭುಸಾರಂಗದೇವ ಶಿವಾಚಾರ್ಯರ ಕೃಪಾಶೀರ್ವಾದವೇ ಕಾರಣ. ಜೊತೆಗೆ ಭೂದಾನಿಗಳಾದ ಶ್ರೀ R.B.ಬೂದಿಹಾಳ, ದಾನಿಗಳಾದ ಸಂಘವಿ ಶ್ರೀ P.G.ಪೋರವಾಲ, ಆದರ್ಶ ಶಿಕ್ಷಕರು ದಾನಿಗಳು ಆದ ಶ್ರೀ V.Vಸಾಲಿಮಠ ಹಾಗೂ ಸಂಸ್ಥೆ ಕಾರ್ಯಕಾರಿ ಮಂಡಳಿ ಮಾರ್ಗದರ್ಶನದಲ್ಲಿ ನಮ್ಮ ವಿದ್ಯಾಸಂಸ್ಥೆ ಪ್ರಗತಿ ಪಥದಲ್ಲಿ ಮುನ್ನಡೆಯುತ್ತಿದೆ.

ಆತ್ಮೀಯರೆ, ನಮ್ಮ ಮಹಾವಿದ್ಯಾಲಯದ 2020-21ನೆಯ ಸಾಲಿನ ಪ್ರಗತಿಯ ಪಕ್ಷಿನೋಟವನ್ನು ತಮ್ಮೆದುರಿಗೆ ಸಾದರಪಡಿಸಲು ಅತೀವ ಸಂತಸವಾಗುತ್ತದೆ.

ನಮ್ಮ ಮಹಾವಿದ್ಯಾಲಯದಲ್ಲಿ ಬಿ.ಎ. ಬಿ.ಕಾಂ. ಬಿ.ಎಸ್‌ಸಿ ಪ್ರಸ್ತುತ ಸಾಲಿನಲ್ಲಿ 1277 ವಿದ್ಯಾರ್ಥಿಗಳು ನಮ್ಮ ಮಹಾವಿದ್ಯಾಲಯದಲ್ಲಿ ಜ್ಞಾನಾರ್ಜನೆಗೆ ತೊಡಗಿದ್ದು, 28 ಜನ ಪೂರ್ಣಾವಧಿ ಪ್ರಾಧ್ಯಾಪಕರು, 17 ಜನ ಅರೆಕಾಲಿಕ ಪ್ರಾಧ್ಯಾಪಕರು, 07 ಜನ ಬೋಧಕೇತರ ಸಿಬ್ಬಂದಿಯವರನ್ನು ಹೊಂದಿದ್ದು, ನಮ್ಮ ಮಹಾವಿದ್ಯಾಲಯವು ಪಠ್ಯ ಪೂರಕ ಚಟುವಟಿಕೆಗಳಲ್ಲಿ ನಿರಂತರವಾಗಿ ತೊಡಗಿಕೊಂಡಿದೆ.

ನಮ್ಮ ಮಹವಿದ್ಯಾಲಯದ ಗ್ರಂಥಾಲಯದಲ್ಲಿ 34,000 ಸಾವಿತರಕ್ಕಿಂತಲು ಅಧಿಕ ಪುಸ್ತಕಗಳಿದ್ದು ಪ್ರಸಕ್ತ ಸಾಲಿನಲ್ಲಿ 8,674 ರೂಪಾಯಿ ಮೌಲ್ಯದ 64 ಅವಲೋಕನ ಗ್ರಂಥಗಳನ್ನು ಖರೀದಿಸಲಾಗಿದೆ. ಇದಲ್ಲದೆ ಡಿಜಿಟಲ್ ಗ್ರಂಥಾಲಯ ಸೌಲಭ್ಯಕೂಡ ವಿದ್ಯಾರ್ಥಿಗಳಿಗೆ ಒದಗಿಸಲಾಗಿದೆ. ಈ ಮೂಲಕ ವಿದ್ಯಾರ್ಥಿಗಳು ಗ್ರಂಥಾಲಯದಲ್ಲಿ ಸಿಗುವ ಪ್ರತಿ ಸೌಲಭ್ಯಗಳನ್ನು ಮನೆಯಲ್ಲಿಯೇ ಕುಳಿತು ಪಡೆಯಬಹುದಾಗಿದೆ. ಗ್ರಂಥಾಲಯವು ಪ್ರತ್ಯೇಕ ವೆಬ್‌ಸೈಟ್ ಹೊಂದಿದ್ದು, ಇಲ್ಲಿ ಇ-ಪುಸ್ತಕ, ಇ-ದಿನಪತ್ರಿಕೆ, ಇ-ಬರಹ, ಇ-ಪ್ರಶ್ನೆಪತ್ರಿಕೆ, ಇ-ಪಠ್ಯಕ್ರಮ ಹಾಗೂ ಇತರೆ ಸೌಲಭ್ಯವನ್ನು ಹೊಂದಿದೆ. ನಮ್ಮ ಗ್ರಂಥಾಲಯವು ಸಂಪೂರ್ಣವಾಗಿ ಯಾಂತ್ರಿಕಗೊಂಡಿದ್ದು E-LIB ಎಂಬ ತಂತ್ರಾಂಶದೊಂದಿಗೆ ಕಾರ್ಯ ನಿರ್ವಹಿಸುತ್ತಿದೆ. ಗ್ರಂಥಾಲಯವು BARCODE ಸೌಲಭ್ಯದೊಂದಿಗೆ ಎಲ್ಲ ಪುಸ್ತಕಗಳ ಮಾಹಿತಿಯನ್ನು ಒದಗಿಸುತ್ತಿದೆ. INFLIBNET CENTER, AHAMADABAD ಇವರ N-List Consortia ಸೌಲಭ್ಯದೊಂದಿಗೆ ಕಾರ್ಯ ನಿರ್ವಹಿಸುತ್ತಿದೆ. ಈ ಮೂಲಕ ಪ್ರಾಧ್ಯಾಪಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ.

ನಮ್ಮ ಮಹಾವಿದ್ಯಾಲಯದಲ್ಲಿ ದಿನಾಂಕ 26-11-2021 ರಂದು ಹೊಸದಾಗಿ ಆಗಮಿಸಿದ ವಿದ್ಯಾರ್ಥಿಗಳಿಗೆ ಪೂರ್ವಾಭಿಮುಖ (Induction Programme) ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಶ್ರೀ D.M. ಪಾಟೀಲ ಮತ್ತು IQAC ಚೇರಮನ್ನರಾದ ಶ್ರೀ D.M. ಸರಶೆಟ್ಟಿ ಹಾಗೂ ಜಮಾಖಾನ ಸೆಕ್ರೆಟರಿ ಆದ Dr. Prakash R. Rathod ಮತ್ತು ಕಾಲೇಜಿನ ಪ್ರಾಧ್ಯಾಪಕರು ಹಾಗೂ ಎಲ್ಲಾ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ನಮ್ಮ ಮಹಾವಿದ್ಯಾಲಯದಲ್ಲಿ ಪಠ್ಯಪೂರಕ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮವನ್ನು 26-11-2021 ರಂದು ಹಮ್ಮಿಕೊಳ್ಳಲಾಗಿತ್ತು. ಈ

ಕಾರ್ಯಕ್ರಮಕ್ಕೆ ಡಾ. ಅಣ್ಣಪ್ಪ ಶೆಟ್ಟಿ ಶಿವಪ್ಪ ಪ್ರಾಚಾರ್ಯರು ಆಗಮಿಸಿ ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು. ನಮ್ಮ ಸಂಸ್ಥೆಯ ಚೇರಮನ್ನರಾದ ಶ್ರೀ ಪ್ರಭು ಸಾರಂಗದೇವ ಶಿವಾಚಾರ್ಯರು ಸಾನಿಧ್ಯ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಆಡಳಿತ ಅಧಿಕಾರಿಗಳಾದ Dr. B. G ಮೂಲಿ, ಪ್ರಾಚಾರ್ಯರಾದ ಶ್ರೀ D.M. ಪಾಟೀಲ ಅಧ್ಯಕ್ಷತೆ ವಹಿಸಿಕೊಂಡಿದ್ದರು ಮತ್ತು IQAC Chairman ರಾದ ಶ್ರೀ D.M. ಸಂಕೆಟ್ಟಿ ಜಿಮಖಾನ ಸಮಿತಿಯ ಅಧ್ಯಕ್ಷರಾದ ಡಾ. ಪ್ರಕಾಶ ಆರ್. ರಾಠೋಡ ಮತ್ತು ಸಿಬ್ಬಂದಿಗಳು ಮತ್ತು ವಿದ್ಯಾರ್ಥಿ/ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಈ ಸಾಲಿನ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಯ ಚೇರಮನ್ನರಾದ ಶ್ರೀ ರವಿ ಗೋಣಿಲಾ ನೇತೃತ್ವದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

- ದಿನಾಂಕ 13/08/2021 ರಂದು "Fit India Run Rally" ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.
- ದಿನಾಂಕ 10/09/2021 ರಂದು ಸ್ವಚ್ಛ ಭಾರತ ಅಭಿಯಾನ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು, ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.
- ದಿನಾಂಕ 22/09/2021 ರಂದು ಕೋವಿಡ-19 ಲಸಿಕೆ ಹಾಕಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.
- ದಿನಾಂಕ 04/10/2021 ರಿಂದ 13/10/2021 ರ ವರೆಗೆ ಎ.ಟಿ.ಸಿ ಕ್ಯಾಂಪ್ ನಡೆಸಲಾಯಿತು
- ದಿನಾಂಕ 20/10/2021 ರಿಂದ 29/10/2021 ರ ವರೆಗೆ ಆರ್.ಡಿ.ಸಿ. ಕ್ಯಾಂಪ್ ನಡೆಸಲಾಯಿತು.
- ದಿನಾಂಕ 13/11/2021 ರಂದು ರಕ್ತದಾನದ ಮಹತ್ವದ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮಕ್ಕೆ ಶ್ರೀ ಕುಲಕರ್ಣಿ ಸರ್

ಆಗಮಿಸಿದ್ದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 18/11/2021 ರಂದು ಬಿ.ಎಲ್.ಡಿ.ಇ. ಆಸ್ಪತ್ರೆ ವಿಜಯಪುರ ಇವರ ಸಹಯೋಗದೊಂದಿಗೆ ಉಚಿತ ಆರೋಗ್ಯ ತಪಾಸಣಾ ಮತ್ತು ನೇತ್ರ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

- ದಿನಾಂಕ 19/11/2021 ರಂದು ಉಚಿತ ರಕ್ತ ತಪಾಸಣಾ ಶಿಬಿರವನ್ನು ಹಮ್ಮಿಕೊಂಡಿದ್ದು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಂದ 72 ಯುನಿಟ್ ರಕ್ತವನ್ನು ಸಂಗ್ರಹಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 26/11/2021 ರಂದು 72ನೇ ಸಂವಿಧಾನ ದಿನಾಚರಣೆ ಪ್ರಯುಕ್ತ, ಮಹಾವಿದ್ಯಾಲಯದ ಸೆಮಿನಾರ್ ಹಾಲ್ ನಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 28/11/2021 ಎನ್. ಸಿ. ಸಿ. ದಿನಾಚರಣೆಯನ್ನು ಆಚರಿಸಲಾಯಿತು.

- ದಿನಾಂಕ 01/12/2021 ರಂದು ವಿಶ್ವ ಏಡ್ಸ್ ದಿನದ ಪ್ರಯುಕ್ತ, ಮಹಾವಿದ್ಯಾಲಯದ ಸೆಮಿನಾರ್ ಹಾಲ್‌ನಲ್ಲಿ ಏಡ್ಸ್ ನಿಯಂತ್ರಣ ಜಾಗೃತಿ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 18/12/2021 ರಂದು ಪ್ಲಾಸ್ಟಿಕ್ ಮುಕ್ತ ಆವರಣ ಜಾಥಾ

- ದಿನಾಂಕ 29/12/2021 ರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರ ಸಹಯೋಗದಲ್ಲಿ ಹಮ್ಮಿಕೊಂಡಿರುವ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ ಕುರಿತು ಅರಿವು ಮೂಡಿಸುವ ತರಬೇತಿಯಲ್ಲಿ ವಿದ್ಯಾರ್ಥಿಗಳೊಂದಿಗೆ ಪಾಲ್ಗೊಳ್ಳಲಾಯಿತು.

- ದಿನಾಂಕ 07/01/2022 ರಂದು ಸಾರಂಗ ಮಠದ ಜಾತ್ರಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ನಮ್ಮ ಮಹಾವಿದ್ಯಾಲಯದಲ್ಲಿ ದಿನಾಂಕ 12-01-2022 ರಂದು ಸ್ವಾಮಿ ವಿವೇಕಾನಂದರ 159 ನೇಯ ಜಯಂತಿಯ ನಿಮಿತ್ತ ಭಾರತದ ಏಳಿಗೆಗೆ ಸ್ವಾಮಿ ವಿವೇಕಾನಂದರ ಕೊಡುಗೆ ಎಂಬ ವಿಷಯದ ಕುರಿತು ಭಾಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಶ್ರೀ ಸಿದ್ಧಲಿಂಗ ಕಿಣಗಿ ಅವರು ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 12/01/2022 ರಿಂದ 18/01/2022 ರ ವರೆಗೆ 75 ನೇಯ ಸ್ವಾತಂತ್ರ ಸುವರ್ಣ ಮಹೋತ್ಸವದ ಅಂಗವಾಗಿ 7 ದಿನಗಳವರೆಗೆ ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 12/01/2022 ರಂದು ಗಾಯನ ಸ್ಪರ್ಧೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಡಾ. ಆರ್. ಎಂ. ಪಾಟೀಲರು ಆಗಮಿಸಿದ್ದರು ಮತ್ತು ಪ್ರೋ. ಡಿ. ಎಂ. ಪಾಟೀಲ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 13/01/2022 ರಂದು ಯುವ ಸಂಸತ್ತು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮಕ್ಕೆ ಪ್ರೋ. ಡಿ. ಎಂ. ಪಾಟೀಲ್ ಅವರು ಚಾಲನೆ ನೀಡಿದರು. ಡಾ. ಸುಮಾ ನಿರ್ಣಿ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದರು, ಮುಖ್ಯ ಅತಿಥಿಗಳಾಗಿ ಡಾ. ಮಹದೇವ. ಜೆ. ಸಂಕಪಾಲ ಉಪಸ್ಥಿತರಿದ್ದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 14/01/2022 ರಂದು ಭಾರತದ ಮಕ್ಕಳಲ್ಲಿ ಪೌಷ್ಟಿಕತೆಯ ಬೆಳವಣಿಗೆ ಕುರಿತು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 17/01/2022 ರಂದು "Fit India Run Rally" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 18/01/2022 ರಂದು ಮಹಾವಿದ್ಯಾಯಲದ ಸಭಾಭವನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 19/01/2022 ರಂದು ಮಹಾವಿದ್ಯಾಯಲದ ಸಭಾಭವನದಲ್ಲಿ ಭಾರತೀಯ ಸೈನಿಕ ದಿನ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 24/01/2022 ರಂದು ಮಹಾವಿದ್ಯಾಯಲದ ಸಭಾಭವನದಲ್ಲಿ ನೇತಾಜಿ ಸುಭಾಸ್ ಚಂದ್ರ ಬೋಸರವರ 125ನೇ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 25/01/2022 ರಂದು ಮಹಾವಿದ್ಯಾಲಯದ ಆವರಣದಲ್ಲಿ ಗಣರಾಜ್ಯೋತ್ಸವದ ಅಂಗವಾಗಿ ಸ್ವಯಂ ಸೇವಕರು ಶ್ರಮದಾನವನ್ನು ಮಾಡಿದರು.

- ದಿನಾಂಕ 24/03/2022 ರಂದು YRC ವತಿಯಿಂದ ಕ್ಷಯ ರೋಗ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 05/04/2022 ರಂದು ಬಿ.ಎಲ್.ಡಿ.ಇ ಆಸ್ಪತ್ರೆಯ ಸಹಯೋಗದೊಂದಿಗೆ ಉಚಿತ ನೇತ್ರ ತಪಾಸಣಾ ಹಾಗೂ ಶಸ್ತ್ರಚಿಕಿತ್ಸಾ

ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಪ್ರಾಚಾರ್ಯರು, ಸಿಬ್ಬಂದಿವರ್ಗ, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

- ದಿನಾಂಕ 06/04/2022 ರಂದು ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ 75 ಯುನಿಟ್ ರಕ್ತವನ್ನು ಸಂಗ್ರಹಿಸಲಾಯಿತು. ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

- ದಿನಾಂಕ 05/06/2022 ರಂದು ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ 25 ವಿವಿಧ ಬಗೆಯ ಸಸಿಗಳನ್ನು ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ನೆಡಸಿದರು.

- ದಿನಾಂಕ 16/06/2022 ರಂದು ಆರಕ್ಷಕ ಠಾಣೆ ಸಿಂದಗಿ ಹಾಗೂ ಎನ್. ಎಸ್. ಎಸ್ ಸಹಯೋಗದೊಂದಿಗೆ "International Day Against Drug Abuse and Illicit Trafficking" ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 21/06/2022 ರಂದು ವಿಶ್ವ ಯೋಗ ದಿನಾಚರಣೆ ಪ್ರಯುಕ್ತ ಎನ್. ಎಸ್. ಎಸ್. ಹಾಗೂ YRC ವತಿಯಿಂದ ಯೋಗದ ಪ್ರಾತ್ಯಕ್ಷಿಕ ಮೂಲಕ ಯೋಗ ದಿನಾಚರಣೆಯನ್ನು ಯಶಸ್ವಿಯಾಗಿ ಆಚರಿಸಲಾಯಿತು.

- ದಿನಾಂಕ 1/08/2022 ರಂದು ತಾಲ್ಲೂಕು ಆಡಳಿತ ಸಿಂದಗಿ ಹಾಗೂ ಮಹಾವಿದ್ಯಾಲಯ ಸಂಯುಕ್ತಾಶ್ರಯದಲ್ಲಿ ಪ.ಪೂ.ಲಿಂ.ಶ್ರೀ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನ ಪ್ರಯುಕ್ತ ವ್ಯಸನ ಮುಕ್ತ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಿಂದಗಿ ಶಾಸಕರಾದ ಮಾನ್ಯ ಶ್ರೀ ರಮೇಶ ಭೂಸನೂರ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

- ದಿನಾಂಕ 12/08/2022 ರಂದು ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ಸ್ವಯಂಸೇವಕರು ಸಿಂದಗಿ ಪಟ್ಟಣದ ವಿವಿದ ಬಡಾವಣೆಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಿದರು. ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 18/08/2022 ರಂದು ಸದ್ಭಾವನಾ ದಿನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

- ದಿನಾಂಕ 20/08/2022 ರಂದು ಸಾರಂಗಮಠ ಸಿಂದಗಿಯಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ 75 ಯುನಿಟ್ ರಕ್ತವನ್ನು ಸಂಗ್ರಹಿಸಲಾಯಿತು. ಮಹಾವಿದ್ಯಾಲಯದ ಪ್ರಾಚಾರ್ಯರು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

ದಿನಾಂಕ 30-7-2022 ರಂದು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಮಟ್ಟದ ಆಜಾದಿಕಾ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿ ವಿದ್ಯಾರ್ಥಿನಿಯರು ನಾಟಕ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನವನ್ನು ಪಡೆದರು.

ನಮ್ಮ ಮಹಾವಿದ್ಯಾಲಯದಲ್ಲಿ 2 ಎನ್.ಎಸ್.ಎಸ್ ಘಟಕಗಳನ್ನು ಹೊಂದಿದ್ದು ಶ್ರೀ ಭೀಮಾಶಂಕರ್ ಅರಳಗುಂಡಗಿ ಹಾಗೂ ಶ್ರೀ ಬಸವರಾಜ ಮಹಾಜನಶೆಟ್ಟಿ ರವರ ಮಾರ್ಗದರ್ಶನದಲ್ಲಿ ವರ್ಷದುದ್ದಕ್ಕೂ ಕ್ರೀಯಾಶೀಲವಾಗಿ ಕಾರ್ಯನಿರ್ವಹಿಸಿದೆ .

ಅಂತರ ಮಹಾವಿದ್ಯಾಲಯಗಳ ವಾಲಿಬಾಲ್ ಅಥ್ಲೆಟಿಕ್ಸ ಕ್ರೀಡಾಕೂಟದಲ್ಲಿ ನಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿ ಗಮನಾರ್ಹ ಪ್ರದರ್ಶನ ತೋರಿದರು.

ಪ್ರಸಕ್ತ ವರ್ಷದ ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯ ಅಂತರ ಮಹಾವಿದ್ಯಾಲಯಗಳ ವಲಯ ಮತ್ತು ಅಂತರ ವಲಯ ಪ್ರರಕ್ಷರ ಕಬಡ್ಡಿ ಪಂದ್ಯಾವಳಿಯನ್ನು ನಮ್ಮ ಮಹಾವಿದ್ಯಾಲಯದ ವತಿಯಿಂದ ಯಶಸ್ವಿಯಾಗಿ ಸಂಘಟಿಸಲಾಯಿತು.

ನಮ್ಮ ಮಹಾವಿದ್ಯಾಲಯದ ಕ್ರೀಡಾ ವಿಭಾಗದ ಮುಖ್ಯಸ್ಥರಾದ ಪ್ರೋ. ರವಿ ಗೋಲಾ ರವರು ಶ್ರೀಲಂಕಾದ ಕೊಲೊಂಬೊದಲ್ಲಿ ಜರುಗಿದ ಕ್ರೀಡಾ ಸಮ್ಮೇಳನದಲ್ಲಿ ಭಾಗವಹಿಸಿರುವರು.

ಹೀಗೆ ಸದಾ ಕ್ರೀಯಾಶೀಲವಾಗಿರುವ ನಮ್ಮ ಮಹಾವಿದ್ಯಾಲಯ ಪೂಜ್ಯರ ಕೃಪಾಶೀರ್ವಾದಿಂದ ಹಾಗೂ ಸಿಂದಗಿಯ ಸಮಸ್ತ ನಾಗರಿಕರ

ಹಾರೈಕೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಮಗ್ರ ವ್ಯಕ್ತಿತ್ವ ವಿಕಸನದಲ್ಲಿ ನಮ್ಮ ಮಹಾವಿದ್ಯಾಲಯವು ದಾಖಲೆಗಳನ್ನು ಸೃಷ್ಟಿಸುತ್ತಾ ಪ್ರಗತಿ ಪಥದಲ್ಲಿ ದಾಪುಗಾಲಿಟ್ಟು ಮುನ್ನಡೆಯುತ್ತಿದೆ ಎಂದು ತಿಳಿಯಪಡಿಸುತ್ತಾ ಪ್ರಸಕ್ತ 2021-22ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನದ ವರದಿ ವಾಚನಕ್ಕೆ ಮಂಗಳ ಕೋರುತ್ತೇನೆ.

ಜೈ ಹಿಂದ ಜೈ ಕರ್ನಾಟಕ

ಡಾ. ಪ್ರಕಾಶ ರಾಠೋಡ್
ಕಾರ್ಯಾಧ್ಯಕ್ಷರು, ವಿದ್ಯಾರ್ಥಿ ಸಂಘ

Coordinator IQAC

ಪ್ರಾಚಾರ್ಯರು,
ಜಿ. ಪಿ. ಪೋರವಾಲ ಕಲಾ, ವಾಣಿಜ್ಯ,
ಮತ್ತು ವ್ಹಿ.ವ್ಹಿ.ಸಾಲಿಮಠ ವಿಜ್ಞಾನ ಮಹಾವಿದ್ಯಾಲಯ
ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ,
ಸಿಂದಗಿ-586128. ಜಿ॥ ವಿಜಯಪು